Akashvani: Bangalore
National Bulletin In Kannada
02.07.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
02.07.2026: 13.10hrs
**********

ಮುಖ್ಯಾಂಶಗಳು :

1. **ಭಾರತ-ಜಪಾನ್ ವಾರ್ಷಿಕ ಶೃಂಗಸಭೆ ಆರಂಭ ; ಹಲವು ಒಪ್ಪಂದ ವಿನಿಮಯ ನಿರೀಕ್ಷೆ**
2. **ಯಾವುದೇ ಸಂದರ್ಭದಲ್ಲೂ ಭಯೋತ್ಪಾದನೆ ಸಮರ್ಥನೆ ಸಲ್ಲ; ಪಿಡುಗು ನಿರ್ಮೂಲನೆಗೆ ಒಗ್ಗಟ್ಟಿನ ಜಾಗತಿಕ ಕ್ರಮ ಅಗತ್ಯ: ವಿಶ್ವಸಂಸ್ಥೆಯಲ್ಲಿ ಭಾರತ ಪ್ರತಿಪಾದನೆ**
3. **ಗುಜರಾತ್, ಮಧ್ಯಪ್ರದೇಶ ಸೇರಿ ಮಧ್ಯ ಭಾರತದ ಹಲವು ಪ್ರದೇಶಗಳಿಗೆ ಇಂದು ಮುಂಗಾರು ವಿಸ್ತರಣೆ**
4. **ಬೆಂಗಳೂರು ಮಾದಪಟ್ಟಣದ ಕ್ರಷರ್ ಕಲ್ಲು ಕ್ವಾರಿಯಲ್ಲಿ ಬಂಡೆ ಕುಸಿತ ;  ಏಳು ವಲಸೆ ಕಾರ್ಮಿಕರ ಸಾವು**
5. **ಫಿಫಾ ವಿಶ್ವಕಪ್ ಫುಟ್ಬಾಲ್: ಪ್ರಿ ಕ್ವಾರ್ಟರ್ ಫೈನಲ್ಸ್‌ಗೆ ಅಮೆರಿಕ ಮುನ್ನಡೆ**

***********

ನವದೆಹಲಿಯಲ್ಲಿ ಭಾರತ ಮತ್ತು ಜಪಾನ್ ನಡುವಿನ ವಾರ್ಷಿಕ ಶೃಂಗಸಭೆ ಪ್ರಗತಿಯಲ್ಲಿದೆ. ಜಪಾನಿನ ಪ್ರಧಾನಿ ಸನಾಯೆ ತಕೈಚಿ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸಭೆಯಲ್ಲಿ ಪಾಲ್ಗೊಂಡಿದ್ದಾರೆ. ಶೃಂಗಸಭೆಯು ದ್ವಿಪಕ್ಷೀಯ ಸಹಕಾರದ ಸಂಪೂರ್ಣ ಆಯಾಮವನ್ನು ಪರಿಶೀಲಿಸಲು ಮತ್ತು ಬಲಪಡಿಸಲು ಮತ್ತು ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಎರಡೂ ಕಡೆಯವರಿಗೆ ಅವಕಾಶವನ್ನು ಒದಗಿಸುತ್ತದೆ. ಸಭೆಯ ಬಳಿಕ ಉಭಯ ರಾಷ್ಟ್ರಗಳು ಹಲವಾರು ತಿಳಿವಳಿಕೆ ಒಪ್ಪಂದಗಳನ್ನು ವಿನಿಮಯ ಮಾಡಿಕೊಳ್ಳುವ ನಿರೀಕ್ಷೆಯಿದೆ. ಜಪಾನ್  ಪ್ರಧಾನಿ ಮೂರು ದಿನಗಳ ಭಾರತ ಪ್ರವಾಸಕ್ಕಾಗಿ ನಿನ್ನೆ ಸಂಜೆ ನವದೆಹಲಿಗೆ ಆಗಮಿಸಿದರು. ಇದು ಪ್ರಧಾನಮಂತ್ರಿ ತಕೈಚಿ ಅವರ ಮೊದಲ ಅಧಿಕೃತ ಭಾರತ ಭೇಟಿಯಾಗಿದೆ. ಭಾರತ ಮತ್ತು ಜಪಾನ್ ನಡುವಿನ ವಿಶೇಷ ಕಾರ್ಯತಂತ್ರ ಮತ್ತು ಜಾಗತಿಕ ಪಾಲುದಾರಿಕೆಯನ್ನು ಮುಂದುವರಿಸುವಲ್ಲಿ ಈ ಭೇಟಿ ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ವಿದೇಶಾಂಗ ಸಚಿವಾಲಯ ಹೇಳಿದೆ. ಆರ್ಥಿಕ ಭದ್ರತೆಯು

ಸಂಬಂಧದ ಪ್ರಮುಖ ಆಧಾರಸ್ತಂಭವಾಗಿ ಹೊರಹೊಮ್ಮಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

***********

ಯಾವುದೇ ಸಂದರ್ಭದಲ್ಲೂ ಭಯೋತ್ಪಾದನೆಯನ್ನು ಸಮರ್ಥಿಸಲು ಸಾಧ್ಯವಿಲ್ಲ ಎಂಬ ದೃಢವಾದ ನಿಲುವನ್ನು ಭಾರತ ಪುನರುಚ್ಚರಿಸಿದೆ. ಜತೆಗೆ ಈ ಪಿಡುಗನ್ನು ತೊಡೆದುಹಾಕಲು ಒಗ್ಗಟ್ಟಿನ ಜಾಗತಿಕ ಕ್ರಮಕ್ಕೆ ಕರೆ ನೀಡಿದೆ. ವಿಶ್ವಸಂಸ್ಥೆಯ ಜಾಗತಿಕ ಭಯೋತ್ಪಾದನಾ ನಿಗ್ರಹ ಕಾರ್ಯತಂತ್ರದ ೯ನೇ ವಿಮರ್ಶೆಯ ಅಂಗೀಕಾರದ ಸಂದರ್ಭದಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯನ್ನುದ್ದೇಶಿಸಿ ಮಾತನಾಡಿದ ವಿಶ್ವಸಂಸ್ಥೆಯ ಭಾರತದ ಖಾಯಂ ಪ್ರತಿನಿಧಿ ಹರೀಶ್ ಪಾರ್ವತನೇನಿ, "ಭಯೋತ್ಪಾದಕನು ಭಯೋತ್ಪಾದಕ" ಎಂದು ಹೇಳಿದರು. ಜತೆಗೆ ಭಯೋತ್ಪಾದನಾ ನಿಗ್ರಹ ಪ್ರಯತ್ನಗಳನ್ನು ಸುಳ್ಳು ಸಮಾನತೆಗಳು ಅಥವಾ ರಾಜಕೀಯಗೊಳಿಸಿದ ನಿರೂಪಣೆಗಳಿಂದ ದುರ್ಬಲಗೊಳಿಸಬಾರದು ಎಂದು ಒತ್ತಿ ಹೇಳಿದರು. ಭಾರತವು ದಶಕಗಳಿಂದ ಗಡಿಯಾಚೆಗಿನ ಭಯೋತ್ಪಾದನೆಯನ್ನು ಅನುಭವಿಸುತ್ತಿದೆ ಮತ್ತು ಆದ್ದರಿಂದ ಎಲ್ಲಾ ರೀತಿಯ ಭಯೋತ್ಪಾದನೆಯನ್ನು ನಿಸ್ಸಂದಿಗ್ಧವಾಗಿ ಖಂಡಿಸಬೇಕು ಎಂದು ನಂಬುತ್ತದೆ ಎಂದು ಅವರು ಹೇಳಿದರು.ಭಯೋತ್ಪಾದನೆ ನಿಗ್ರಹದಲ್ಲಿ ಯಾವುದೇ ದ್ವಂದ್ವ ನೀತಿ ಇರಬಾರದು ಎಂದು ಒತ್ತಿ ಹೇಳಿದ ಅವರು, ಅಪರಾಧಿಗಳು, ಸಂಘಟಕರು, ಹಣಕಾಸು ಒದಗಿಸುವವರು ಭಯೋತ್ಪಾದನೆಯ ಪ್ರಾಯೋಜಕರನ್ನು ಹೊಣೆಗಾರರನ್ನಾಗಿ ಮಾಡುವಂತೆ ಸದಸ್ಯ ರಾಷ್ಟ್ರಗಳಿಗೆ ಕರೆ ನೀಡಿದರು. ಭಯೋತ್ಪಾದಕರಿಗೆ ಹಣಕಾಸು ಒದಗಿಸುವುದನ್ನು ಎದುರಿಸುವುದು ಮತ್ತು ಉದಯೋನ್ಮುಖ ತಂತ್ರಜ್ಞಾನಗಳನ್ನು ಬಳಸಿಕೊಳ್ಳುವುದನ್ನು ತಡೆಯುವುದು ಜಾಗತಿಕ ಆದ್ಯತೆಗಳಾಗಿ ಉಳಿಯಬೇಕು ಎಂದು ರಾಯಭಾರಿ ಪಾರ್ವತನೇನಿ ಒತ್ತಿ ಹೇಳಿದ್ದಾರೆ. ಅಂತಾರಾಷ್ಟ್ರೀಯ ಭಯೋತ್ಪಾದನೆ ಕುರಿತ ಸಮಗ್ರ ಸಮಾವೇಶವನ್ನು ಶೀಘ್ರ ಅಳವಡಿಸಿಕೊಳ್ಳಬೇಕೆಂಬ ಭಾರತದ ಕರೆಯನ್ನು ಪುನರುಚ್ಚರಿಸಿದ ಅವರು, ಪರಿಣಾಮಕಾರಿ ಜಾಗತಿಕ ಸಹಕಾರಕ್ಕೆ ಸಾರ್ವತ್ರಿಕ ಕಾನೂನು ಚೌಕಟ್ಟು ಅತ್ಯಗತ್ಯ ಎಂದು ಹೇಳಿದರು.

***********

ನೈಋತ್ಯ ಮುಂಗಾರು ಇಂದು ದೆಹಲಿ, ಗುಜರಾತ್, ಉತ್ತರ ಪ್ರದೇಶ, ಮಧ್ಯಪ್ರದೇಶ, ಹರಿಯಾಣ, ಪಂಜಾಬ್ ಮತ್ತು ರಾಜಸ್ಥಾನದ ಕೆಲವು ಭಾಗಗಳಿಗೆ ಮತ್ತಷ್ಟು ವಿಸ್ತರಿಸಿದೆ. ಇದರಿಂದಾಗಿ ರಾಷ್ಟ್ರ ರಾಜಧಾನಿಯಲ್ಲಿ ಉಲ್ಲಾಸದಾಯಕ ಮಳೆಯು ಬಿಸಿ ಮತ್ತು ಆರ್ದ್ರ ಹವಾಮಾನಕ್ಕೆ ಪರಿಹಾರ

ಸಿಕ್ಕಂತಾಗಿದೆ. ಮುಂದಿನ ೨-೩ ದಿನಗಳಲ್ಲಿ ಮುಂಗಾರು ಉತ್ತರ ಭಾರತದ ಹಲವಾರು ಭಾಗಗಳಲ್ಲಿ ಮತ್ತಷ್ಟು ಮುಂದುವರಿಯುವ ನಿರೀಕ್ಷೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

***********

ಕೇರಳದ ಬಹುತೇಕ ಭಾಗಗಳಲ್ಲಿ ಇಂದು ಮಳೆ ದುರ್ಬಲಗೊಳ್ಳುವ ನಿರೀಕ್ಷೆಯಿದೆ. ಕೋಝಿಕ್ಕೋಡ್, ಕಣ್ಣೂರು, ಕಾಸರಗೋಡು ಹೊರತುಪಡಿಸಿ ಕೇರಳದ ಎಲ್ಲ ಜಿಲ್ಲೆಗಳಲ್ಲಿ ಮಳೆಯ ತೀವ್ರತೆ ಕಡಿಮೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಸೂಚಿಸಿದೆ. ಕಳೆದ ಎರಡು ದಿನಗಳಿಂದ ಆರೆಂಜ್ ಅಲರ್ಟ್ ಆಗಿದ್ದ ಕಣ್ಣೂರು ಮತ್ತು ಕಾಸರಗೋಡು ಪ್ರದೇಶವನ್ನು ಇಂದು ಯೆಲ್ಲೊ ಅಲರ್ಟ್‌ಗೆ ಇಳಿಸಲಾಗಿದೆ. ಇದು ಪ್ರತ್ಯೇಕ ಭಾರಿ ಮಳೆಯ ಸಾಧ್ಯತೆಯನ್ನು ಸೂಚಿಸುತ್ತದೆ.

***********

ಐಎಸ್‌ಐ ಪ್ರಾಯೋಜಿತ ಅಂತರರಾಜ್ಯ ಭಯೋತ್ಪಾದನೆ ಮತ್ತು ಶಸ್ತ್ರಾಸ್ತ್ರ ಜಾಲದ ವಿರುದ್ಧ ದಮನ ನಡೆಸಿದ ನಾಲ್ವರು ಆರೋಪಿಗಳನ್ನು ದೆಹಲಿ ಪೊಲೀಸ್ ವಿಶೇಷ ಘಟಕ ಬಂಧಿಸಿದೆ. ಐಎಸ್‌ಐ ನಿರ್ವಾಹಕ ಶಹಜಾದ್ ಭಟ್ಟಿ ಮತ್ತು ಅವರ ಸಹಚರರ ಸೂಚನೆಯ ಮೇರೆಗೆ ಆರೋಪಿಗಳು ರಾಷ್ಟ್ರ ರಾಜಧಾನಿಯಲ್ಲಿ ಭಯೋತ್ಪಾದಕ ಚಟುವಟಿಕೆಯನ್ನು ನಡೆಸಲು ಯೋಜಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಕಾರ್ಯಾಚರಣೆ ವೇಳೆ ಎರಡು ವಿದೇಶಿ ನಿರ್ಮಿತ ಪಿಸ್ತೂಲ್, ೯ ಜೀವಂತ ಗುಂಡುಗಳು ಮತ್ತು ಐದು ಮೊಬೈಲ್ ಫೋನ್ ಗಳನ್ನು ವಶಪಡಿಸಿಕೊಳ್ಳಲಾಗಿದೆ.ದೆಹಲಿ ಪೊಲೀಸರ ಪ್ರಕಾರ, ಆರೋಪಿಗಳು ಪತ್ತೆಯಾಗುವುದನ್ನು ತಪ್ಪಿಸಲು ವಿದೇಶಿ ಸಂಖ್ಯೆಗಳನ್ನು ಬಳಸುತ್ತಿದ್ದರು ಮತ್ತು ಈ ಸಂಖ್ಯೆಗಳನ್ನು ಅವರ ಪಾಕಿಸ್ತಾನಿ ಹ್ಯಾಂಡ್ಲರ್ ವ್ಯವಸ್ಥೆ ಮಾಡಿದ್ದಾರೆ. ಪಂಜಾಬ್ ನ ಆರೋಪಿಗಳಲ್ಲಿ ಒಬ್ಬನಿಗೆ ದೆಹಲಿಯ ಧಾರ್ಮಿಕ ಸ್ಥಳಗಳು ಮತ್ತು ಪೊಲೀಸ್ ಸಂಸ್ಥೆಗಳ ಪರಿಶೀಲನೆ ನಡೆಸುವ ಕಾರ್ಯವನ್ನು ವಹಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

***********

ಕರ್ನಾಟಕದ ಬೆಂಗಳೂರು ದಕ್ಷಿಣ ತಾಲ್ಲೂಕಿನಲ್ಲಿ ಇಂದು ಕಲ್ಲು ಬಂಡೆಯೊಂದು ಜಾರಿ ಬಿದ್ದ ಪರಿಣಾಮ ಏಳು ವಲಸೆ ಕಾರ್ಮಿಕರು ಪ್ರಾಣ ಕಳೆದುಕೊಂಡಿದ್ದಾರೆ. ಈ ದುರಂತವು ಮಾದಪಟ್ಟಣ ಗ್ರಾಮದ ಕಾವೇರಿ ಕ್ರಷರ್ ಕಲ್ಲು ಕ್ವಾರಿಯಲ್ಲಿ ಸಂಭವಿಸಿದೆ. ಕ್ವಾರಿಯ ಮೇಲ್ಭಾಗದಲ್ಲಿದ್ದ ಬೃಹತ್ ಬಂಡೆಯನ್ನು ಸರಿಸುವಾಗ, ಅದು ಆಕಸ್ಮಿಕವಾಗಿ ಜಾರಿ ಕೆಳಗೆ ಕಾರ್ಮಿಕರು ಕೆಲಸ ಮಾಡುತ್ತಿದ್ದ ಕ್ವಾರಿಯ ಹೊಂಡಕ್ಕೆ ಬಿದ್ದಿದೆ. ಘಟನೆಯಲ್ಲಿ ಗಾಯಗೊಂಡವರನ್ನು ಅಪಘಾತದ ಸ್ಥಳದಿಂದ ರಕ್ಷಿಸಿ,

ಸದ್ಯ ವೈದ್ಯಕೀಯ ಚಿಕಿತ್ಸೆ ನೀಡಲಾಗುತ್ತಿದೆ.ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ತಲೆಮರೆಸಿಕೊಂಡಿರುವ ಕ್ವಾರಿ ಮಾಲೀಕರ ಪತ್ತೆಗೆ ಜಾಲ ಬೀಸಿದ್ದಾರೆ. ಮೃತರನ್ನು ಬಿಹಾರ, ಮಧ್ಯಪ್ರದೇಶ ಮತ್ತು ಉತ್ತರ ಕರ್ನಾಟಕ ಮೂಲದವರೆಂದು ಗುರುತಿಸಲಾಗಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಈ ಘಟನೆಗೆ ತೀವ್ರ ಕಳವಳ ವ್ಯಕ್ತಪಡಿಸಿದ್ದು, ತಮ್ಮ ಅಡಿಯಲ್ಲಿದ್ದ ಕಾರ್ಮಿಕರ ಸುರಕ್ಷತೆಯನ್ನು ಕಾಯ್ದುಕೊಳ್ಳುವಲ್ಲಿ ವಿಫಲರಾದ ಕ್ವಾರಿ ಮಾಲೀಕರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

***********

ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, 'ಏಕ್ ಪೆಡ್ ಮಾ ಕೆ ನಾಮ್' ಅಭಿಯಾನದ ಅಡಿಯಲ್ಲಿ ದೆಹಲಿ ಸಚಿವಾಲಯದಲ್ಲಿ ಗ್ರೀನ್ ಡ್ರೈವ್ ಪೋರ್ಟಲ್‌ಗೆ ಚಾಲನೆ ನೀಡಿದ್ದಾರೆ. ರಾಷ್ಟ್ರ ರಾಜಧಾನಿಯಾದ್ಯಂತ ೭೦ ಲಕ್ಷ ಸಸಿಗಳನ್ನು ನೆಡುವ ಮಿಷನ್ ಅನ್ನು ಮುಂದಕ್ಕೆ ಕೊಂಡೊಯ್ಯಲಾಗಿದೆ. ಹಸಿರು, ಸ್ವಚ್ಛ ಮತ್ತು ಆರೋಗ್ಯಕರ ರಾಜಧಾನಿಗಾಗಿ ಈ ಜನಾಂದೋಲನಕ್ಕೆ ಪ್ರತಿಯೊಬ್ಬ ದೆಹಲಿ ನಿವಾಸಿಯೂ ಕೈಜೋಡಿಸಬೇಕೆಂದು ಅವರು ಒತ್ತಾಯಿಸಿದರು.

***********

ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಇಂದು ಬೆಳಗ್ಗೆ ಜಮ್ಮುವಿನ ಭಗವತಿ ನಗರ ಮೂಲ ಶಿಬಿರದಿಂದ ವಾರ್ಷಿಕ ಅಮರನಾಥ ಯಾತ್ರೆಯ ಮೊದಲ ಯಾತ್ರಾರ್ಥಿಗಳ ತಂಡಕ್ಕೆ ಹಸಿರು ನಿಶಾನೆ ತೋರಿದರು. ೩೭ ದಿನಗಳ ವಾರ್ಷಿಕ ತೀರ್ಥಯಾತ್ರೆಯು ನಾಳೆ ಅಧಿಕೃತವಾಗಿ ಕಾಶ್ಮೀರದ ಅವಳಿ ಮಾರ್ಗಗಳಲ್ಲಿ ಪ್ರಾರಂಭವಾಗಲಿದ್ದು, ಆಗಸ್ಟ್ ೯ರಂದು ಮುಕ್ತಾಯಗೊಳ್ಳಲಿದೆ. ಯಾತ್ರಾರ್ಥಿಗಳ ಮೊದಲ ಬೆಂಗಾವಲು ಪಡೆಯನ್ನು ಬಿಗಿ ಭದ್ರತೆಯಲ್ಲಿ ಮುಂಜಾನೆ ಜಮ್ಮುವಿನಿಂದ ರವಾನಿಸಲಾಯಿತು. ಅನಂತನಾಗ್ ಜಿಲ್ಲೆಯ ಸಾಂಪ್ರದಾಯಿಕ ೪೮ ಕಿಲೋಮೀಟರ್ ನನ್ವಾನ್-ಪಹಲ್ಗಾಮ್ ಮಾರ್ಗ ಮತ್ತು ಗಂದೇರ್ಬಾಲ್ ಜಿಲ್ಲೆಯ ೧೪ ಕಿ.ಮೀ ಬಾಲ್ತಾಲ್ ಮಾರ್ಗದ ಮೂಲಕ ಯಾತ್ರೆ ನಡೆಯುತ್ತದೆ. ಹೈ-ರೆಸಲ್ಯೂಶನ್ ಸಿಸಿಟಿವಿ ಕ್ಯಾಮೆರಾಗಳು ಮತ್ತು ಆರ್ ಎಫ್ ಐಡಿ ಟ್ರ್ಯಾಕಿಂಗ್ ನೊಂದಿಗೆ ಬಹು-ಹಂತದ ಭದ್ರತಾ ಗ್ರಿಡ್ ಜಾರಿಯಲ್ಲಿದೆ. ಯಾತ್ರಿಕರು ಜಮ್ಮು-ಶ್ರೀನಗರ ರಾಷ್ಟ್ರೀಯ ಹೆದ್ದಾರಿಯಲ್ಲಿ ಪ್ರತ್ಯೇಕವಾಗಿ ಪ್ರಯಾಣಿಸಬೇಕು. ಯಾತ್ರಾ ಸಂಚಾರಕ್ಕೆ ಮೊಘಲ್ ರಸ್ತೆ ಮತ್ತು ಧಾರ್ ರಸ್ತೆಯಂತಹ ಪರ್ಯಾಯ ಮಾರ್ಗಗಳನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಆನ್‌ಲೈನ್ ಮತ್ತು ಆಫ್‌ಲೈನ್ ನೋಂದಣಿಗಳೆರಡೂ

ಸಕ್ರಿಯವಾಗಿದ್ದು, ಯಾತ್ರೆ ಪ್ರಾರಂಭವಾಗುವ ಮೊದಲು ಸದ್ಯಸುಮಾರು ೪ ಲಕ್ಷ ಯಾತ್ರಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ.

***********

ಅಮೆರಿಕ, ಮೆಕ್ಸಿಕೊ ಮತ್ತು ಕೆನಡಾ ಜಂಟಿ ಆತಿಥ್ಯದಲ್ಲಿ ನಡೆಯುತ್ತಿರುವ ಫಿಫಾ ವಿಶ್ವಕಪ್ ಫುಟ್ಬಾಲ್ ಟೂರ್ನಿಯ ೩೨ನೇ ಸುತ್ತಿನ ಪಂದ್ಯದಲ್ಲಿ ಬೆಲ್ಜಿಯಂ ತಂಡವು ೩-೨ ಗೋಲುಗಳ ಅಂತರದಿಂದ ಸೆನೆಗಲ್ ತಂಡವನ್ನು ಮಣಿಸಿ ೧೬ನೇ ಸುತ್ತಿಗೆ ಅರ್ಹತೆ ಪಡೆದಿದೆ. ಯೂರಿ ಟೈಲೆಮನ್ಸ್ ೧೨೫ನೇ ನಿಮಿಷದಲ್ಲಿ ಪೆನಾಲ್ಟಿ ಮೂಲಕ ಗೋಲ್‌ಗಳಿಸಿ ಬೆಲ್ಜಿಯಂ ತಂಡಕ್ಕೆ ೩-೨ ಗೋಲುಗಳಿಂದ ನಾಟಕೀಯ ಗೆಲುವು ತಂದುಕೊಟ್ಟರು. ಇದರೊಂದಿಗೆ ಬೆಲ್ಜಿಯಂನ ಅಜೇಯ ಓಟ ೧೭ ಪಂದ್ಯಗಳಿಗೆ ವಿಸ್ತರಿಸಿದೆ. ಬೆಲ್ಜಿಯಂ ತಂಡವು ಪ್ರಿ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಅಮೆರಿಕವನ್ನು ಎದುರಿಸಲಿದೆ. ಮತ್ತೊಂದು ೩೨ನೇ ಸುತ್ತಿನ ಪಂದ್ಯದಲ್ಲಿ ಅಮೆರಿಕ ತಂಡ ೨-೦ ಗೋಲುಗಳ ಅಂತರದಿಂದ ಬೋಸ್ನಿಯಾ ತಂಡದ ವಿರುದ್ಧ ಗೆದ್ದು, ಪ್ರಿ ಕ್ವಾರ್ಟರ್ ಫೈನಲ್‌ಗೆ ಮುನ್ನಡೆದಿದೆ. ಅಟ್ಲಾಂಟಾದಲ್ಲಿ ಕಳೆದ ರಾತ್ರಿ ನಡೆದ ೩೨ನೇ ಸುತ್ತಿನ ಪಂದ್ಯದಲ್ಲಿ ಇಂಗ್ಲೆಂಡ್, ಡೆಮಾಕ್ರಟಿಕ್ ರಿಪಬ್ಲಿಕ್ ಆಫ್ ಕಾಂಗೋ ತಂಡವನ್ನು ೨-೧ ಗೋಲುಗಳಿಂದ ಸೋಲಿಸಿ ಪ್ರಿ ಕ್ವಾರ್ಟರ್ ಫೈನಲ್‌ಗೆ ಮುನ್ನಡೆದಿದೆ. ಹ್ಯಾರಿಕೇನ್ ಅಂತಿಮ ೧೫ ನಿಮಿಷಗಳಲ್ಲಿ ಎರಡು ಗೋಲುಗಳಿಸಿ ಜಯದ ರೂವಾರಿಯೆನಿಸಿದರು. ಜುಲೈ ೬ರಂದು ನಡೆಯಲಿರುವ ೧೬ನೇ ಸುತ್ತಿನ ಪಂದ್ಯದಲ್ಲಿ ಇಂಗ್ಲೆಂಡ್ ತಂಡ ಸಹ ಆತಿಥೇಯ ಮೆಕ್ಸಿಕೋ ತಂಡವನ್ನು ಎದುರಿಸಲಿದೆ.

***********

೧೩೫ನೇ ಆವೃತ್ತಿಯ ಡುರಾಂಡ್ ಕಪ್ ಇದೇ ೨೫ರಿಂದ ಕೋಲ್ಕತ್ತಾದಲ್ಲಿ ಆರಂಭವಾಗಲಿದ್ದು, ಆಗಸ್ಟ್ ೨೩ರವರೆಗೆ ರಾಂಚಿ, ಇಂಫಾಲ್, ಶಿಲ್ಲಾಂಗ್ ಮತ್ತು ಗುವಾಹಟಿಯಲ್ಲಿ ನಡೆಯಲಿದೆ. ಕೋಲ್ಕತ್ತಾದ ವಿವೇಕಾನಂದ ಯುವ ಭಾರತಿ ಕ್ರೀಡಾಂಗಣ ಮತ್ತು ಕಿಶೋರ್ ಭಾರತಿ ಕ್ರೀಡಾಂಗಣದಲ್ಲಿ ಆರಂಭಿಕ ಪಂದ್ಯ, ಎರಡು ಕ್ವಾರ್ಟರ್ ಫೈನಲ್‌ಗಳು, ಒಂದು ಸೆಮಿಫೈನಲ್ ಮತ್ತು ಫೈನಲ್ ಪಂದ್ಯವನ್ನು ಆಯೋಜಿಸಲಾಗಿದೆ.

******END*****